ಹೆಚ್ಚುವರಿ ಸಿವಿಲ್ ನ್ಯಾಯಾದೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ, ಕುಂದಾಪುರ

ಸಿಸಿ ನಂಬ್ರಃ **1603/2018**

ಸಿಡಬ್ಲ್ಯೂ-**5** ಪಿಡಬ್ಲ್ಯೂ- **5**

ದಿನಾಂಕಃ 02-03-2023

| | | |
|---|---|---|
| ಸಾಕ್ಷಿದಾರರ ಹೆಸರು | : | ಅಶ್ವಕ್ |
| ತಂದೆಯ ಹೆಸರು | : | ಶಾಬಾನ್ |
| ಪ್ರಾಯ | : | 31 ವರ್ಷ |
| ಉದ್ಯೋಗ | : | ಖಾಸಗಿ ಉದ್ಯೋಗ |
| ವಾಸ | : | ಕೋಟ |

ಪ್ರಮಾಣ ವಚನ ಮಾಡಿಸಲಾಯಿತು

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ

ಸುಮಾರು 5 ವರ್ಷಗಳ ಹಿಂದೆ ಪೊಲೀಸರು ಹಂಗ್ಳೂರು ಗ್ರಾಮದಲ್ಲಿದ್ದಾಗ ಒಂದು ದಾಖಲೆಗೆ ನನ್ನ ಸಹಿ ಪಡೆದಿರುತ್ತಾರೆ. ಸದರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿರುವುದಿಲ್ಲ. ಸಾಕ್ಷಿಯು ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-3 ಎಂದು ಈಗಾಗಲೇ ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-3(ಸಿ} ಎಂದು ಗುರುತಿಸಲಾಯಿತು. ನನ್ನ ಸಮಕ್ಷಮದಲ್ಲಿ ಯಾವುದೇ ಕಾರನ್ನು ಜಪ್ತಿಪಡಿಸಿಕೊಂಡಿರುವುದಿಲ್ಲ.

ಈ ಹಂತದಲ್ಲಿ ಸಾಕ್ಷಿಯು ಹೇಳಿಕೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಪ್ರತಿಕೂಲ ಸಾಕ್ಷಿ ಎಂದು ವಿನಂತಿಸಿಕೊಂಡಿದ್ದರಿಂದ ಅದರ ಸತ್ಯಾಸತ್ಯತೆಯನ್ನು ಮನಗಂಡು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಸಹಾಯಕ ಸರ್ಕಾರಿ ಅಭಿಯೋಜಕರಿಗೆ ಪಾಟಿ ಸವಾಲಿಗೆ ಅನುಮತಿ ನೀಡಲಾಯಿತು

ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ

ದಿಃ 11-01-2018 ರಂದು ಕುಂದಾಪುರ ವೃತ್ತ ಕಚೇರಿಯ ಹಿಂಭಾಗದಲ್ಲಿ ಬೆಳಿಗ್ಗೆ 10 ಗಂಟೆಗೆ ನನ್ನನ್ನು ಮತ್ತು ಚಾಸಾ-4 ರವರನ್ನು ಕರೆಯಿಸಿ ನಮ್ಮ ಸಮಕ್ಷಮದಲ್ಲಿ ಚಾಸಾ-1 ರವರು ಹಾರಜು ಪಡಿಸಿದ ಕಾರನ್ನು ಮಹಜರು ಮಾಡಿ ಜಪ್ತಿ ಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ನಿಪಿ-3 ರಂತೆ ಮಹಜರು ತಯಾರಿಸಿ ಓದಿ

ಹೇಳಿ ನನ್ನ ಸಹಿ ಪಡೆದಿರುತ್ತಾರೆಂದರೆ ಸರಿಯಲ್ಲ. ನಿಪಿ-3 ರ ಸಂಗತಿಗಳು ಗೊತ್ತಿದ್ದರೂ ಸಹಾ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟಿ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಕೆ.ಎಂ.ಐ ರವರಿಂದ

ಆರೋಪಿತರ ಪರ ವಕೀಲರು ಪಾಟಿ ಸವಾಲು ಇಲ್ಲ ಎಂದು ತಿಳಿಸಿದ ಮೇರೆಗೆ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆಃ ಇಲ್ಲ

ಓದಿ ಹೇ. ಕೇ. ಸರಿ ಇದೆ.

ನನ್ನ ಹೇ. ಮೇ. ಬೆ. ಮಾಡಲಾಗಿದೆ

ಹೆಚ್ಚುವರಿ ಸಿವಿಲ್ ನ್ಯಾಯಾದೀಶರು
ಮತ್ತು ಜೆ.ಎಂ.ಎಫ್.ಸಿ. ಕುಂದಾಪುರ. C/c